ಶ್ರೀ ವೈಜನಾಥ ಪಾಟೀಲ್ (ನಗರಾಭಿವೃದ್ಧಿ, ಕಾಡಾ ಮತ್ತು ಹೈದ್ರಾಬಾದ್-ಕರ್ನಾಟಕ ಅಭಿವೃದ್ಧಿ ಮಂಡಳಿ ಸಚಿವರು) :-

ಅ) ಗಮನಕ್ಕೆ ಬಂದಿದೆ.

ಆ) ಇಲ್ಲ. ಆದರೂ ಈ ಬಗ್ಗೆ ಹುಬ್ಬಳ್ಳಿ-ಧಾರವಾಡ ಮಹಾನಗರಸಭೆಯು ಹುಡ್ಕೋ ಸಂಸ್ಥೆಯ ಆರ್ಥಿಕ ಸಹಾಯದಿಂದ ಸೂಪರ್ ಮಾರುಕಟ್ಟೆಯನ್ನು ಹಾಲಗೇರಿ ಕೆರೆಯಲ್ಲಿ ಕಟ್ಟಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ವಿಷಯ :- ಹಟ್ಟಿಯ ಗೋಕುಲ ಗ್ರಾಮಕ್ಕೊಂದು ವ್ಯಾಯಾಮ ಶಾಲೆ

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 409 (3029)

ಶ್ರೀ ಜಗದೀಶ್ ಶೆಟ್ಟರ (ಹುಬ್ಬಳ್ಳಿ ಗ್ರಾಮೀಣ) :- ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹುಬ್ಬಳ್ಳಿ-ಧಾರವಾಡ ಮಹಾನಗರದ ಹಟ್ಟಿಯ ಗೋಕುಲ ಗ್ರಾಮದಲ್ಲಿ ವ್ಯಾಯಾಮ ಶಾಲೆ ಕಟ್ಟಿಸಲು ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರವು ನಿರ್ಣಯ ಕೈಗೊಂಡಿರುವುದು ನಿಜವಲ್ಲವೆ ;

ಆ) ಹಾಗಿದ್ದಲ್ಲಿ, ಅದು ಇನ್ನೂ ಕಾರ್ಯಗತವಾಗದೆಯಿರಲು ಕಾರಣವೇನು ಮತ್ತು ಇನ್ನು ಎಷ್ಟು ದಿವಸಗಳಲ್ಲಿ ಅದನ್ನು ಕಾರ್ಯಗತ ಮಾಡಲಾಗುವುದು?

ಶ್ರೀ ವೈಜನಾಥ ಪಾಟೀಲ್ (ನಗರಾಭಿವೃದ್ಧಿ ಸಚಿವರು):-

ಅ) ಹುಬ್ಬಳ್ಳಿಯ ಗೋಕುಲ ಗ್ರಾಮದಲ್ಲಿ ವ್ಯಾಯಾಮ ಶಾಲೆ ಕಟ್ಟಿಸಲು ಪ್ರಾಧಿಕಾರವು ಯಾವುದೇ ನಿರ್ಣಯ ಕೈಗೊಂಡಿರುವುದಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ವಿಷಯ :- ಮಾನ್ವಿ ಪಟ್ಟಣಕ್ಕೆ ಕುಡಿಯುವ ನೀರಿನ ಸರಬರಾಜು.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 413 (2997)

ಶ್ರೀ ಗಂಗಾಧರ ನಾಯಕ್ (ಮಾನ್ವಿ) :- ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಾನ್ವಿ ಪಟ್ಟಣಕ್ಕೆ ಕಾತುಕಿ ಗ್ರಾಮದ ಹತ್ತಿರ ಇರುವ ತುಂಗಭದ್ರಾ ನದಿಯಿಂದ ಕುಡಿಯುವ ನೀರಿನ ಯೋಜನೆಯ ಕಾಮಗಾರಿ ಪ್ರಾರಂಭವಾಗಿ 3-4 ವರ್ಷಗಳು ಆಗಿದ್ದರು ಕೆಲಸ ಪ್ರಾರಂಭವಾಗದೆ ಮಾನ್ವಿ ನಗರದಲ್ಲಿ ಕುಡಿಯುವ ನೀರಿನ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಈ ತೊಂದರೆ ನಿವಾರಿಸಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?